ರಾಜ್ಯದಲ್ಲಿ ಮಂಜುಗಡ್ಡೆ ತಯಾರಿಕಾ ಘಟಕಗಳು ಮುಚ್ಚುತ್ತಿರುವುದು

103 (832) ಶ್ರೀ ಸದಾನಂದ ಗೌಡ ಡಿ.ವಿ. (ಪುತ್ತೂರು) : ಮಾನ್ಯ ಸಣ್ಣ ಕೈಗಾರಿಕಾ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ಒಟ್ಟು ಎಷ್ಟು ಮಂಜುಗಡ್ಡೆ ತಯಾರಿಕಾ ಘಟಕಗಳು ಇವೆ; ಇವುಗಳಲ್ಲಿ ಎಷ್ಟು ಕಾರ್ಯ ನಿರ್ವಹಿಸುತ್ತಿವೆ; (ಜಿಲ್ಲಾವಾರು ಮಾಹಿತಿ ನೀಡುವುದು)

ಆ) ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಲ್ಲಿ ಮತ್ಸ್ಯಕ್ಷಾಮದಿಂದ ಮಂಜೂಗಡ್ಡೆ ಉದ್ಯಮಕ್ಕೆ ಹಾನಿಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಇ) ಮಂಜುಗಡ್ಡೆ ಉದ್ಯಮದ ಹಾನಿಯಿಂದಾಗಿ ಈ ಉದ್ಯಮವನ್ನೇ ನಂಬಿ ಜೀವನ ನಡೆಸುತ್ತಿದ್ದ ಕೂಲಿ ಕಾರ್ಮಿಕರು ನಿರ್ಗತಿಕರಾಗಿದ್ದು, ಇವರಿಗೆ ಪರ್ಯಾಯ ವ್ಯವಸ್ಥೆ ಕಲ್ಪಿಸಿ ಕೊಡುವಲ್ಲಿ ಸರ್ಕಾರದ ನಿಲುವೇನು?

ಶ್ರೀ ಎಸ್. ಆರ್. ಕಾಶಪ್ಪನವರ್ (ಸಣ್ಣ ಕೈಗಾರಿಕೆ ಸಚಿವರು) :

ಅ) ರಾಜ್ಯದಲ್ಲಿ 259 ಮಂಜುಗಡ್ಡೆ ತಯಾರಿಕಾ ಘಟಕಗಳಿವೆ. ಇವುಗಳಲ್ಲಿ 210 ಘಟಕಗಳು ಕಾರ್ಯನಿರ್ವಹಿಸುತ್ತಿವೆ. ಜಿಲ್ಲಾವಾರು ಮಾಹಿತಿಯನ್ನು ಲಗತ್ತಿಸಲಾಗಿದೆ.

ಆ) ಬಂದಿಲ್ಲ

ಇ) ಉದ್ಭವಿಸುವುದಿಲ್ಲ.

ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ 832ಕ್ಕೆ ಅನುಬಂಧ

ರಾಜ್ಯದಲ್ಲಿರುವ ಮಂಜುಗಡ್ಡೆ ತಯಾರಿಕಾ ಘಟಕಗಳ ಜಿಲ್ಲಾವಾರು ವಿವರ

ಕ್ರಮ ಸಂಖ್ಯೆ	ಜಿಲ್ಲೆ	ನೊಂದಾಯಿತ ಘಟಕಗಳ	ಕಾರ್ಯನಿರ್ವಹಿಸುತ್ತಿರುವ ಘಟಕಗಳ ಸಂಖ್ಯೆ
1	2	3	4
01.	ಬೆಂಗಳೂರು (ನಗರ)	08	08
02.	ಬೆಂಗಳೂರು (ಗ್ರಾಮಾಂತರ)	-	-
03.	ಬೆಳಗಾವಿ	10	08
04.	ಬಿಜಾಪುರ	04	04
05.	ಬೀದರ್	14	11